## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:**- ರಾಜ್ಯ ಸರ್ಕಾರಿ ನೌಕರರ ಅವಲಂಬಿತ ಅಂಧ ಮತ್ತು ಅಂಗವಿಕಲ ಮಕ್ಕಳಿಗೆ ಶಿಕ್ಷಣ ಭತ್ಯೆಯ ಸೌಲಭ್ಯವನ್ನು ಮಂಜೂರು ಮಾಡುವ ಬಗ್ಗೆ.

ಪ್ರಸ್ತಾವನೆ:

2011 ರ ಅಧಿಕಾರಿ ವೇತನ ಸಮಿತಿಯು ಒಂದನೇ ತರಗತಿಯಿಂದ ಹನ್ನೆರಡನೇ ತರಗತಿಯವರೆಗೆ ವಿಶೇಷ, ಸಂಯೋಜಿತ (integrated) ಅಥವಾ ಸಾಮಾನ್ಯ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಸರ್ಕಾರಿ ನೌಕರರ ಅಂಗವೈಕಲ್ಯ ಹೊಂದಿರುವ ಮಕ್ಕಳ ಶಿಕ್ಷಣಕ್ಕಾಗಿ ಒಂದು ಮಗುವಿಗೆ ಮಾಸಿಕ ತಲಾ ರೂ.500/- ರಂತೆ ಶಿಕ್ಷಣ ಭತ್ಯೆಯನ್ನು ಎರಡು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಮಾತ್ರ ಮಂಜೂರು ಮಾಡಲು ಮಾಡಿರುವ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ ಮತ್ತು ಈ ಕೆಳಕಂಡಂತೆ ಆದೇಶಿಸಿದೆ:

### ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (XIII)
### ಬೆಂಗಳೂರು, ದಿನಾಂಕ 10ನೇ ಜೂನ್ 2013

ವಿಶೇಷ, ಸಂಯೋಜಿತ (integrated) ಅಥವಾ ಸಾಮಾನ್ಯ ಶಾಲೆಗಳಲ್ಲಿ ಒಂದನೇ ತರಗತಿಯಿಂದ ಹನ್ನೆರಡನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಮತ್ತು ಗರಿಷ್ಠ 18 ವರ್ಷಗಳ ವಯೋಮಿತಿ ಮೀರದ ರಾಜ್ಯ ಸರ್ಕಾರಿ ನೌಕರರ ಅವಲಂಬಿತ ಅಂಧ ಅಥವಾ ಚಲನವೈಕಲ್ಯತೆ ಹೊಂದಿರುವ ಮಕ್ಕಳ ಶಿಕ್ಷಣಕ್ಕಾಗಿ ಒಂದು ಮಗುವಿಗೆ ಮಾಸಿಕ ತಲಾ ರೂ.500/-ಗಳಂತೆ ಗರಿಷ್ಠ ಎರಡು ಮಕ್ಕಳಿಗೆ ಶಿಕ್ಷಣ ಭತ್ಯೆಯನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸರ್ಕಾರಿ ನೌಕರನಿಗೆ ಹಿಂಬರಿಸಲು ಸರ್ಕಾರವು ಹರ್ಷಿಸುತ್ತದೆ:

1. ಕನಿಷ್ಠ ಶೇ.40 ಮತ್ತು ಅದಕ್ಕಿಂತ ಹೆಚ್ಚಿನ ಅಂಧ ಅಥವಾ ಅಂಗವಿಕಲತೆ ಹೊಂದಿರುವ ಮಕ್ಕಳು ಮಾತ್ರ ಶಿಕ್ಷಣ ಭತ್ಯೆಗೆ ಅರ್ಹರಾಗುತ್ತಾರೆ.

2. ಮಕ್ಕಳ ಅಂಧ ಮತ್ತು ಅಂಗವಿಕಲತೆಯ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರ ಶಿಫಾರಸ್ಸಿನೊಂದಿಗೆ ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು ಮತ್ತು ಪ್ರಮಾಣ ಪತ್ರವನ್ನು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸಿದ ದಿನಾಂಕದಿಂದ ಈ ಭತ್ಯೆಗೆ ಅರ್ಹರಾಗುತ್ತಾರೆ.

3. ಸರ್ಕಾರಿ ನೌಕರರ ಅಂಧ ಮತ್ತು ಅಂಗವಿಕಲ ಮಕ್ಕಳು ಸಂಪೂರ್ಣವಾಗಿ ಅವರ ಮೇಲೆ ಅವಲಂಬಿತರಿರುವ ಬಗ್ಗೆ ಸರ್ಕಾರಿ ನೌಕರನು ನೀಡುವ ಘೋಷಣೆಯ ಆಧಾರದ ಮೇಲೆ ಈ ಸೌಲಭ್ಯ ನೀಡತಕ್ಕದ್ದು.

4. ಸರ್ಕಾರಿ ನೌಕರನ ಅವಲಂಬಿತ ಅಂಧ ಮತ್ತು ಅಂಗವಿಕಲ ಮಕ್ಕಳು ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ವಿಶೇಷ ಭತ್ಯೆ/ಇತರೆ ಸೌಲಭ್ಯ ಪಡೆಯುತ್ತಿದ್ದಲ್ಲಿ, ಈ ಸೌಲಭ್ಯ ಪಡೆಯಲು ಸರ್ಕಾರಿ ನೌಕರನು ಅರ್ಹರಾಗುವುದಿಲ್ಲ.

5. ಅಂಧ ಮತ್ತು ಅಂಗವಿಕಲ ಮಕ್ಕಳ ತಂದೆ ಮತ್ತು ತಾಯಿ, ಇಬ್ಬರೂ ಸರ್ಕಾರಿ ನೌಕರರಾಗಿದ್ದಲ್ಲಿ, ಒಬ್ಬರಿಗೆ ಮಾತ್ರ ಈ ಭತ್ಯೆಯನ್ನು ಹಿಂಬರಿಸತಕ್ಕದ್ದು.

6. ಅಂಧ ಮತ್ತು ಅಂಗವಿಕಲ ಮಕ್ಕಳು 12ನೇ ತರಗತಿಯಲ್ಲಿ ವ್ಯಾಸಂಗ ಮಾಡುವವರೆಗೆ ಅಥವಾ ಅವರಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಈ ಭತ್ಯೆಯನ್ನು ಹಿಂಬರಿಸತಕ್ಕದ್ದು.

ಈ ಆದೇಶದನ್ವಯ, ನೀಡಲಾಗುವ ಶಿಕ್ಷಣ ಭತ್ಯೆಯನ್ನು ಮಂಜೂರು ಮಾಡಲು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 300 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು
2. ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಇಲಾಖಾ ಮುಖ್ಯಾಧಿಕಾರಿಗಳು
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.

13. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
14. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ **www.finance.kar.nic.in** ವೀಕ್ಷಿಸಿ.